ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 3–12–2014

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | **Department of Factories, Boilers. Industrial Safety and Health, Bengaluru :**<br><br>**Chemical Disaster prevention Day – 2014:**<br><br>**One Day Seminar on "Prevention of Industrial/ Chemical Disasters in Pharmaceutical and Fine Chemical Industries".**<br><br>**Inauguration of Seminar:**<br><br>**Sri P.T. Parameshwara Naik, Minister of State for Labour,**<br><br>**Presdided by:**<br><br>**Sri P.B. Ramamurthy, Additional Chief Secretary to Government, Labour Department**<br><br>**Chief Guest:**<br><br>**Dr Kiran Mazumdar Shaw, Chairman & Managing** | 04–12–02014<br>**Thursday, at 10-00 AM** | **Chancery Hall, Hotel Atria, Palace Road, Bengaluru – 560 001.** |

| | | | |
|---|---|---|---|
| | **Director, M/s. Biocon Ltd, Bengaluru and President, CREDAI, Bengaluru.** | | |
| **2.** | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ನಡೆಸಲಾಗುತ್ತಿರುವ ಸಮೀಕ್ಷೆಯ ಬಗ್ಗೆ ರಾಜ್ಯದ ವಿವಿಧ ಜನಾಂಗಗಳ ಸಂಘಟನೆಗಳ ಮುಖಂಡರ ಸಭೆ :<br>ಅಧ್ಯಕ್ಷತೆ:<br>ಶ್ರೀ ಹೆಚ್.ಆಂಜನೇಯ,<br>ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು | 04-12-2014<br>ಗುರುವಾರ<br>ಬೆಳಗ್ಗೆ 10-30 ಗಂಟೆಗೆ | ಡಿ. ದೇವರಾಜ ಅರಸು ಭವನ, ವಸಂತನಗರ, ಬೆಂಗಳೂರು. |
| **3.** | ಶ್ರೀ ಹೆಚ್. ಜಯರಾಂ, ಬೆಂಗಳೂರು ಇವರಿಂದ ಕರ್ನಾಟಕ ರಾಜ್ಯ ಜವಳಿ ಮೂಲಕ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರ ಹುದ್ದೆ ಅಧಿಕಾರ ಸ್ವೀಕಾರ. | 04-12-2014<br>ಗುರುವಾರ<br>ಬೆಳಗ್ಗೆ 11-30 ಗಂಟೆಗೆ | 6ನೇ ಮಹಡಿ, ಡಿ.ಜೆ.ಸಿ. ಸಂಕೀರ್ಣ, ಒಕ್ಕಲಿಗರ ಭವನ, ಕಿತ್ತೂರು ರಾಣಿ ಚೆನ್ನಮ್ಮ ವೃತ್ತ ಬೆಂಗಳೂರು – 560 027. |
| **4.** | **PRESS MEET regarding 29th All India Postal Volley Ball Tournament.** | 04-12-02014<br>**Thursday, at 3-00 PM** | **O/o Chief Postmaster General, Palace Road, Bengaluru-560 001.** |
| **5** | ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವತಿಯಿಂದ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಬಗ್ಗೆ ಅರಿವು ಮೂಡಿಸುವ ಕುರಿತು ಪತ್ರಿಕಾಗೋಷ್ಠಿ | **4–12–2014**<br>ಗುರುವಾರ<br>ಮಧ್ಯಾಹ್ನ<br>**3–00** ಗಂಟೆಗೆ | ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ,<br>5 ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,<br>ಡಾ: ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು |
| **6** | **JOINT PRESS MEET by Justice D.H. Waghela, Chief Justice, High Court of Karnataka and Justice N.K. Patil, Judge, High Court of** | 04-12-02014<br>**Thursday, at 5-00 PM** | **Patron-in-Chief Hall, II Floor, High Court Building, Bengaluru – 560 001.** |

| | | | |
|---|---|---|---|
| | **Karnataka and Executive Chairman Karnataka State Legal Services Authority – regarding national Lok Adalat.** | | **(Entry through backside gate near Cubbon Statue)** |

**ನಿರ್ದೇಶಕರ ಪರವಾಗಿ**

# ಪತ್ರಿಕಾ ಪ್ರಕಟಣೆ

## ಚಿತ್ರ ಶೀರ್ಷಿಕೆ:

Photo; MKS_6802

It's a Fruitful Discussion !

Karnataka Chief Minister Mr Siddaramaiah called on the Union Minister for Chemicals and Fertilizers,Mr Ananth Kumar in New Delhi on Dec-03.and Had a fruitful discussion regarding the pending proposals pertaining Fertilizer issue.Special Representative to the Government of Karnataka in New Delhi Mr Appaji C S Nadagouda,Additional Chief Secretary to Chief Minister Mr Narasimharaju and Joint Resident Commissioner Mr C G Suprasanna are also seen in the picture.

## ಗೋದಾಮುಗಳ ಕೊರತೆ ನೀಗಲು ಕ್ರಮ: ಸಚಿವ ಕೃಷ್ಣ ಬೈರೇಗೌಡ

ಬೆಂಗಳೂರು, ಡಿ. 3 (ಕರ್ನಾಟಕ ವಾರ್ತೆ)–

ರಾಜ್ಯದಲ್ಲಿ ರೈತರು ಬೆಳೆದ ಬೆಳೆಗಳನ್ನು ಸಂಗ್ರಹಿಸಡಲು ಗೋದಾಮುಗಳ ಕೊರತೆಯಿದ್ದು, ರಾಜ್ಯದ ಎಲ್ಲ ಭಾಗಗಳಲ್ಲಿ ವೈಜ್ಞಾನಿಕ ಗೋದಾಮುಗಳನ್ನು ಸದ್ಯದಲ್ಲೇ ಪ್ರಾರಂಭಿಸಲಾಗುವುದು ಎಂದು ಕೃಷಿ ರಾಜ್ಯ ಸಚಿವ ಶ್ರೀ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ಅವರು ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಬಂಧ ನಬಾರ್ಡ್ ವತಿಯಿಂದ 1700 ಕೋಟಿ ರೂ. ಸಹಾಯಧನ ಕೋರಲಾಗಿದೆ. ಈ ಬಗ್ಗೆ ಪ್ರಸ್ತಾವನೆ ಸಿದ್ಧಪಡಿಸಲಾಗಿದೆ. ರಾಜ್ಯದಲ್ಲಿ 5 ಲಕ್ಷ ಮೆಟ್ರಿಕ್ ಟನ್ ಆಹಾರ ಧಾನ್ಯಗಳನ್ನು ಸಂಗ್ರಹಿಸುವ ಸಾಮರ್ಥ್ಯ ಗೋದಾಮುಗಳಿಗೆ ಇದೆ. 10 ಲಕ್ಷ ಮೆಟ್ರಿಕ್ ಟನ್ ಸಂಗ್ರಹಣಾ ಸಾಮರ್ಥ್ಯದ ಗೋದಾಮುಗಳನ್ನು ನಿರ್ಮಾಣ ಮಾಡಲಾಗುವುದು ಎಂದರು.

ಪ್ರಕೃತಿ ವಿಕೋಪದಿಂದ ನಷ್ಟಕ್ಕೊಳಗಾದ ರೈತರಿಗೆ ರಾಜ್ಯ ಸರ್ಕಾರ ಈ ವರೆಗೆ 537 ಕೋಟಿ ರೂ. ಗಳನ್ನು ಬಿಡುಗಡೆ ಮಾಡಲಾಗಿದೆ ಎಂದ ಸಚಿವರು, ಈರುಳ್ಳಿ ಪರಿಹಾರ ಧನ 36 ಕೋಟಿ ರೂ.ಗಳನ್ನು ಈ ವಾರದಲ್ಲಿ ರೈತರಿಗೆ ವಿತರಿಸಲುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಮುಂಗಾರು ಹಂಗಾಮಿಗೆ ಈ ವರ್ಷ ವಿವಿಧ ಕೃಷಿ ಬೆಳೆಗಳ ಬಿತ್ತನೆ ಗುರಿ 74 ಲಕ್ಷ ಹೆಕ್ಟೇರ್ ಪ್ರದೇಶವಿದ್ದು, ಸೆಪ್ಟೆಂಬರ್ ಅಂತ್ಯಕ್ಕೆ 69.35 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ಕೈಗೊಳ್ಳಲಾಗಿದೆ ಎಂದರು. ಹಿಂಗಾರು ಹಂಗಾಮಿನಲ್ಲಿ ಬಿತ್ತನೆ ಗುರಿ 33.70 ಲಕ್ಷ ಹೆಕ್ಟೇರ್ ಆಗಿದ್ದು, ನವೆಂಬರ್ ಅಂತ್ಯಕ್ಕೆ 25.18 ಲಕ್ಷ ಹೆಕ್ಟೇರ್ ವಿಸ್ತೀರ್ಣದಲ್ಲಿ ಬಿತ್ತನೆ ಕಾರ್ಯ

ಕೈಗೊಳ್ಳಲಾಗಿದೆ ಎಂದರು. ನವೆಂಬರ್ ಅಂತ್ಯದ ವರೆಗೆ ಒಟ್ಟು 1.44 ಲಕ್ಷ ಕ್ವಿಂಟಾಲ್ ಬಿತ್ತನೆ ಬೀಜ ವಿತರಿಸಲಾಗಿದೆ ಎಂದು ತಿಳಿಸಿದರು. ಉತ್ಪಾದನೆ ಗುರಿ 135 ಲಕ್ಷ ಟನ್ ಆಗಿದ್ದು, ಪ್ರಾಥಮಿಕ ಅಂದಾಜು ಪ್ರಕಾರ 128 ಲಕ್ಷ ಟನ್ ಆಹಾರ ಧಾನ್ಯಗಳ ಉತ್ಪಾದನೆಯನ್ನು ನಿರೀಕ್ಷಿಸಲಾಗಿದೆ ಎಂದು ತಿಳಿಸಿದರು.

ಈ ಸಾಲಿನಲ್ಲಿ ಶೇ. 3 ರಿಂದ 4 ರಷ್ಟು ಇಳುವರಿ ಕುಂಠಿತವಾಗಬಹುದು ಎಂದು ಹೇಳಿದರು. ಇದರಿಂದಾಗಿ ಆಹಾರ ಭದ್ರತೆಯ ದೃಷ್ಟಿಯಿಂದ ಯಾವುದೇ ರೀತಿಯ ತೊಂದರೆಯಾಗುವುದಿಲ್ಲ ಎಂದು ಅವರು ವಿವರಿಸಿದರು.

ಬೆಳೆ ಹಾನಿಗೆ ರಾಜ್ಯ ಸರ್ಕಾರದ ವತಿಯಿಂದ ಸ್ವಲ್ಪ ಮಟ್ಟಿಗೆ ಪರಿಹಾರ ನೀಡಲಾಗಿದೆ ಎಂದ ಸಚಿವರು, ಕೇಂದ್ರ ಸರ್ಕಾರಕ್ಕೆ ಎರಡು ಬಾರಿ ಮನವಿ ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರದಿಂದ ಹಣ ಇನ್ನೂ ಬಿಡುಗಡೆಯಾಗಿಲ್ಲ ಎಂದ ಹೇಳಿದರು.

ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಕಡಿಮೆ ಬಾಡಿಗೆ ದರದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಒದಗಿಸಲು ರಾಜ್ಯದ 186 ಬಾಡಿಗೆ ಆಧಾರಿತ ಸೇವಾ ಕೇಂದ್ರಗಳನ್ನು ಖಾಸಗಿ ಸಹಭಾಗಿತ್ವದಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆ. 185 ಕೇಂದ್ರಗಳ ಸ್ಥಾಪನೆಗೆ ಕಾರ್ಯಾದೇಶ ನೀಡಲಾಗಿದೆ. ಎರಡು ವರ್ಷಗಳ ಮಟ್ಟಿಗೆ ಸರ್ಕಾರದಿಂದ ಹಣವನ್ನೂ ನೀಡಲಾಗುವುದು. ನಂತರ ಆ ಸಂಸ್ಥೆಯವರೇ ನಡೆಸಿಕೊಂಡು ಹೋಗುತ್ತಾರೆ ಎಂದು ತಿಳಿಸಿದರು.

ಮುಂದಿನ ಮೂರು ವರ್ಷಗಳಲ್ಲಿ ಸರ್ಕಾರ ಎಲ್ಲ ರೈತರ ಕೃಷಿ ಭೂಮಿಯ ಮಣ್ಣು ಪರೀಕ್ಷೆ ಮಾಡಿ, ಮಣ್ಣಿನ ಆರೋಗ್ಯ ಕಾರ್ಡ್ ನೀಡಲು ಪ್ರಸಕ್ತ ವರ್ಷದಿಂದಲೇ ಮಣ್ಣಿನ ಆರೋಗ್ಯ ಅಭಿಯಾನ ಕಾರ್ಯಕ್ರಮ ಆರಂಭಿಸಲಾಗುವುದು ಎಂದರು. ಸರ್ಕಾರದ ಮಟ್ಟದಲ್ಲಿ 23 ಮಣ್ಣು ಪರೀಕ್ಷಾ ಕೇಂದ್ರಗಳಿದ್ದು, ಜೊತೆಗೆ ಖಾಸಗಿ ಪ್ರಯೋಗಾಲಯಗಳಲ್ಲೂ ಮಣ್ಣು ಪರೀಕ್ಷೆ ಮಾಡಿಕೊಡಲಾಗುವುದು ಎಂದರು.

ಬೆಳೆ ಪರಿಹಾರ ಹಣವನ್ನು ಮಳೆ ಆಧಾರಿತ ಬೆಳೆಗಳಿಗೆ ಪ್ರತಿ ಹೆಕ್ಟೇರಿಗೆ 4500 ರೂ. ಗಳನ್ನು ನೀಡಲು ಸರ್ಕಾರ ನಿರ್ಧರಿಸಿದೆ ಎಂದ ಸಚಿವರು, ಆಯಾ ಹಂಗಾಮಿನಲ್ಲೇ ರೈತರಿಗೆ ಪರಿಹಾರದ ಹಣ ನೇರವಾಗಿ ತಲುಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಆಹಾರ ಧಾನ್ಯಗಳ ಬೆಲೆ ಕುಸಿತಗೊಂಡಾಗ ಸರ್ಕಾರ ಮಧ್ಯ ಪ್ರವೇಶಿಸಿ, 1800 ಕೋಟಿ ರೂ. ವೆಚ್ಚದಲ್ಲಿ ಬೆಂಬಲ ಬೆಲೆಯಲ್ಲಿ ರೈತರಿಂದ ಆಹಾರ ಧಾನ್ಯಗಳನ್ನು ಖರೀದಿಸಲಾಗಿದೆ. ಹಿಂದೆಂದೂ ಈ ದಾಖಲೆ ಮೊತ್ತದಲ್ಲಿ ಆಹಾರ ಧಾನ್ಯ ಖರೀದಿಸಲಾಗಿಲ್ಲ ಎಂದು ಸಚಿವರು ತಿಳಿಸಿದರು.

ಕೃಷಿಯಲ್ಲಿ ಮೂಲಭೂತ ಯೋಜನೆಗಳ ಕೊರತೆಗಳನ್ನು ಪತ್ತೆ ಹಚ್ಚಿ ಪರಿಹಾರ ಕಂಡುಕೊಳ್ಳಬೇಕು ಎಂಬುದು ನಮ್ಮ ಇಲಾಖೆಯ ಚಿಂತನೆಯಾಗಿದೆ. ಕೃಷಿ ಇಲಾಖೆ ಮತ್ತು ಕೃಷಿ ವಿಶ್ವವಿದ್ಯಾನಿಲಯಗಳು ರೈತರ ಅಭಿವೃದ್ಧಿಗೆ ಮತ್ತು ಅವರು ಬೆಳೆಯುವ ಬೆಳೆಗಳ ಇಳುವರಿ ಹೆಚ್ಚಿಸಲು ಸದಾ ಚಿಂತನೆ ನಡೆಸಬೇಕೆಂದು ಅಭಿಪ್ರಾಯ ಪಟ್ಟ ಅವರು ಮುಂದಿನ 4 ವರ್ಷದಲ್ಲಿ ಶೇ. 25 ರಷ್ಟು ಇಳುವರಿ ಹೆಚ್ಚಿಸುವುದು ಸರ್ಕಾರದ ಗುರಿ ಎಂದು ನುಡಿದರು.

## ಕೆ.ಎ.ಎಸ್ ಪರೀಕ್ಷೆಗೆ ಶುಲ್ಕ ಪಾವತಿಸುವಂತೆ ಸೂಚನೆ

**ಬೆಂಗಳೂರು, ಡಿಸೆಂಬರ್ 3 (ಕರ್ನಾಟಕ ವಾರ್ತೆ)**

ಡಿಸೆಂಬರ್ 2014 ರ ನಾಲ್ಕನೇ ವಾರದಲ್ಲಿ ನಡೆಯಲಿರುವ ಕರ್ನಾಟಕ ಮುಕ್ತ ವಿದ್ಯಾಲಯದ (ಕೆ.ಓ.ಎಸ್) ಪರೀಕ್ಷೆಗೆ ಕೆ.ಓ.ಎಸ್. ಕಲಿಕಾ ಕೇಂದ್ರಗಳಿಗೆ ಪರೀಕ್ಷಾ ಶುಲ್ಕವನ್ನು ಪಾವತಿಸಲು ಡಿಸೆಂಬರ್ 10 ಕೊನೆಯ ದಿನವಾಗಿದೆ ಎಂದು ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿಯ ಪ್ರಕಟಣೆ ತಿಳಿಸಿದೆ.

ಸಮ:ಜಿಪಿಆರ್.

## ಪ್ರಥಮ ಮತ್ತು ದ್ವಿತೀಯ ಡಿ.ಇ.ಡಿ. ಪರೀಕ್ಷೆಗೆ ಶುಲ್ಕ ಪಾವತಿಸಲು ಸೂಚನೆ

ಬೆಂಗಳೂರು, ಡಿಸೆಂಬರ್ 3 (ಕರ್ನಾಟಕ ವಾರ್ತೆ)

ಡಿಸೆಂಬರ್ – 2014 ರ ನಾಲ್ಕನೇ ವಾರದಲ್ಲಿ ನಡೆಯಲಿರುವ ಪ್ರಥಮ ಮತ್ತು ದ್ವಿತೀಯ ಡಿ.ಇಡಿ ಪೂರಕ ಪರೀಕ್ಷೆಗಳಿಗೆ ಸರ್ಕಾರಿ ಮತ್ತು ಮಾನ್ಯತೆ ಪಡೆದ ಶಿಕ್ಷಕರ ತರಬೇತಿ ಸಂಸ್ಥೆಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಲು ಡಿಸೆಂಬರ್ 10 ಕೊನೆಯ ದಿನವಾಗಿದೆ. ಡಿಸೆಂಬರ್ 10 ರೊಳಗೆ ಆಯಾ ತರಬೇತಿ ಸಂಸ್ಥೆಗಳಲ್ಲಿ ನಿಗಧಿತ ಶುಲ್ಕ ಪಾವತಿಸುವಂತೆ ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ ಪ್ರಕಟಣೆ ತಿಳಿಸಿದೆ.

ಸಮ:ಜಿಪಿಆರ್.